ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಗಳ ಕಾರ್ಯವಿಧಾನದ ಬಗ್ಗೆ

ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶನ ಹೊಂದಿದವರು) -

74(552) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಗಳಾವುವು; ಸದರಿ ಅಂಗ ಸಂಸ್ಥೆಗಳ ಕಾರ್ಯವಿಧಾನದ ಕುರಿತು ಸಂಪೂರ್ಣ ಮಾಹಿತಿ ನೀಡುವುದು;

(ಆ) ದುರ್ಬಲ ವರ್ಗಕ್ಕೆ ಸೇರಿದ ಮಹಿಳಾ ಗುಂಪು ಮತ್ತು ಮಹಿಳೆಯರನ್ನು ನಿರಂತರ ಆದಾಯದ ಚಟುವಟಿಕೆಗಳ ಮೂಲಕ ಆರ್ಥಿಕ ಸಬಲರನ್ನಾಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಕ್ರಮ ಕೈಗೊಂಡಿದ್ದರೆ, ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ?